ಅ) 1166 ಪ್ರಕರಣಗಳು

ವಿವರಗಳನ್ನು ಈ ಕೆಳಗೆ ನೀಡಲಾಗಿದೆ.

ಕ್ರ.ಸಂ.		1996	1997	1998	1999	2000	ಒಟ್ಟು
1)	ಬಲಿಗೆ ಬಿದ್ದ ಪ್ರಕರಣಗಳು	260	245	203	102	185	1085
2)	ದಾಳಿ ಪ್ರಕರಣಗಳು	15	08	07	20	31	81
						ಒಟ್ಟು	1166

ಇ), ಈ) ಲೋಕಾಯುಕ್ತದ ಶಿಫಾರಸ್ಸುಗಳನ್ನು ಪರಿಶೀಲಿಸಿ, ಸಕ್ಷಮ ಪ್ರಾಧಿಕಾರಗಳು ಕ್ರಮ ಜರುಗಿಸುತ್ತಿವೆ. ಕೇಂದ್ರೀಕೃತ ಮಾಹಿತಿ ಕೂಡಲೇ ಲಭ್ಯವಿಲ್ಲ.

ಚಿಕ್ಕನಾಯಕನ ಹಳ್ಳಿ ಕ್ಷೇತ್ರದಲ್ಲಿ ವಿದ್ಯುತ್ ಸಂಪರ್ಕವಿಲ್ಲದ ಹಳ್ಳಿಗಳು

2464 (2845) ಶ್ರೀ ಸುರೇಶ್‌ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ವಿದ್ಯುತ್ ಸಂಪರ್ಕ ಪಡೆಯದೆ ಇರುವ ಹಳ್ಳಿಗಳು ಎಷ್ಟಿವೆ;

ಆ. ಈ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವನ್ನು ಎಷ್ಟು ದಿನಗಳಲ್ಲಿ ಸರ್ಕಾರ ಕಲ್ಪಿಸಲಾಗುವುದು.

ಶ್ರೀ ವೀರಕುಮಾರ್ ಅ. ಪಾಟೀಲ್ (ಇಂಧನ ರಾಜ್ಯ ಸಚಿವರು) :—

ಅ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 1991ರ ಜನಗಣತಿ ಪ್ರಕಾರ ಜನವಸತಿಯಿರುವ 226 ಕಂದಾಯ ಗ್ರಾಮಗಳಿದ್ದು, ಈ ಎಲ್ಲಾ ಕಂದಾಯ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿರುತ್ತದೆ.

ಆ. ಉದ್ಭವಿಸುವುದಿಲ್ಲ.

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಗ್ರಾಮಾಂತರ ಪ್ರದೇಶದ ವಿದ್ಯುತ್ ಪರಿವರ್ತಕಗಳ ಬದಲಾವಣೆ

2465(2846) ಶ್ರೀ ಸುರೇಶ್‌ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಆ. ಚಿಕ್ಕನಾಯಕನಹಳ್ಳಿ ಕ್ಷೇತ್ರದ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯದಿಂದ ಸುಟ್ಟು ಹೋಗಿರುವ ಪರಿವರ್ತಕಗಳನ್ನು ಬದಲಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ ಇದುವರೆವಿಗೆ ಬದಲಿ ಪರಿವರ್ತಕಗಳನ್ನು ಕೋರಿ ಬಂದಿರುವ ಮನವಿಗಳೆಷ್ಟು. ಎಷ್ಟು ಬದಲಾಯಿಸಿದೆ.

ಇ. ಬದಲಾಯಿಸದೆ ಉಳಿದಿರುವ ಪರಿವರ್ತಕಗಳನ್ನು ಎಷ್ಟು ದಿನಗಳಲ್ಲಿ ಬದಲಾಯಿಸಲಾಗುವುದು?

ಶ್ರೀ ವೀರಕುಮಾರ್ ಆ. ಪಾಟೀಲ್ (ಇಂಧನ ರಾಜ್ಯ ಸಚಿವರು) :—

ಆ. ವಿಳಂಬವಾಗುತ್ತಿರುವುದು ಗಮನಕ್ಕೆ ಬಂದಿದೆ.

ಆ. ದಿನಾಂಕ 1-4-2001 ರಿಂದ 15-7-2001ರ ವರೆಗೆ ವಿಫಲಗೊಂಡಿದ್ದ 95 ಟ್ರಾನ್ಸ್‌ಫಾರ್ಮರ್‌ಗಳ ಪೈಕಿ 83 ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾಯಿಸಲಾಗಿದೆ.

ಇ. ಬಾಕಿ ಇರುವ ವಿಫಲಗೊಂಡ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾಯಿಸಲು ಕ್ರಮ ಜರಗಿಸಲಾಗುತ್ತಿದ್ದು, ಶೀಘ್ರದಲ್ಲಿಯೇ ಬದಲಾಯಿಸಲಾಗುವುದು.

ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಂದನಕೆರೆ ಪೋಲೀಸ್ ಠಾಣೆ ಕಟ್ಟಡ ನಿರ್ಮಾಣ

2466(2895) ಶ್ರೀ ಸುರೇಶ್‌ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ಚಿಕ್ಕನಾಯಕನಹಳ್ಳಿ ತಾಲ್ಲೂಕ್ ಹಂದನಕೆರೆ ಪೋಲೀಸ್ ಠಾಣೆಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ ಸ್ವಂತ ಕಟ್ಟಡ ನಿರ್ಮಿಸಲು ಮತ್ತು ಸಿಬ್ಬಂದಿ ವರ್ಗದವರಿಗೆ ವಸತಿಗೃಹ ನಿರ್ಮಿಸಲು ಏನು ಕ್ರಮ ಕೈಗೊಳ್ಳಲಾಗುತ್ತಿದೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :—

1) ಹೌದು.

2) ಪೋಲೀಸ್ ಠಾಣೆ ಕಟ್ಟಡ ಹಾಗೂ ಸಿಬ್ಬಂದಿ ವರ್ಗದವರಿಗೆ ವಸತಿಗೃಹಗಳ ನಿರ್ಮಾಣಕ್ಕಾಗಿ ನಿವೇಶನವನ್ನು ರೆವಿನ್ಯೂ ಇಲಾಖೆಯಿಂದ ಪಡೆಯಲು ಪ್ರಯತ್ನ ನಡೆಸಲಾಗುತ್ತಿದೆ.